# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 348 |
| ಸದಸ್ಯರ ಹೆಸರು | : | ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 14.09.2021. |
| ಉತ್ತರಿಸುವವರು | : | ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು. |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೊರೋನ ಮತ್ತು ಲಾಕ್‌ಡೌನ್ ಕಾರಣದಿಂದ ಅನೇಕ ಸಣ್ಣ ಮತ್ತು ಗುಡಿ ಕೈಗಾರಿಕೆಗಳು ತೊಂದರೆಗೊಳಗಾಗಿದ್ದು, ಅವುಗಳ ಮನಃಶ್ಚೇತನಕ್ಕೆ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ;</td><td>
ಕೊರೋನಾದಿಂದ ಅನೇಕ ಸಣ್ಣ ಉದ್ಯಮಗಳಿಗೆ ತೊಂದರೆಯಾಗಿದ್ದು, ಈ ಸಂದರ್ಭದಲ್ಲಿ ಸಣ್ಣ ಉದ್ದಿಮೆದಾರರಿಗೆ ಪ್ರೋತ್ಸಾಹ ನೀಡಲು ಈ ಕೆಳಗಿನ ಯೋಜನೆಗಳನ್ನು ಜಾರಿಗೊಳಿಸಲಾಗಿದೆ.
ಕೇಂದ್ರ ಸರ್ಕಾರ ಘೋಷಿಸಿರುವ "ಆತ್ಮ ನಿರ್ಭರ ಭಾರತ ಅಭಿಯಾನ" ದ ಅಡಿಯಲ್ಲಿ ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು ಮತ್ತು ಉದ್ಯಮಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಯಲ್ಲಿ ಈ ಕೆಳಗಿನ ನೆರವು ದೊರೆತಿದೆ.
ಭಾರತ ಸರ್ಕಾರವು "ಇ.ಸಿ.ಎಲ್.ಜಿ"–ಎಮರ್ಜೆನ್ಸಿ ಕ್ರೆಡಿಟ್ ಲೈನ್ ಗ್ಯಾರಂಟಿ ಯೋಜನೆಯನ್ನು ಜಾರಿಗೆ ತಂದಿದ್ದು ಇದರನ್ವಯ ಫೆಬ್ರವರಿ 2020 ರ ಅಂತ್ಯಕ್ಕೆ ಬ್ಯಾಂಕ್‌ಗಳಲ್ಲಿ ಬಾಕಿ ಇರುವ ಎಂ.ಎಸ್.ಎಂ.ಇ ಘಟಕಗಳ ಸಾಲದ ಮೊತ್ತಕ್ಕೆ ಶೇ 20% ರಷ್ಟು ಹೆಚ್ಚುವರಿ ಸಾಲವನ್ನು ಯಾವುದೇ ಹೆಚ್ಚುವರಿ ಖಾತರಿ ಇಲ್ಲದೇ ನೀಡುವ ಯೋಜನೆಯನ್ನು ಜಾರಿಗೆ ತಂದಿರುತ್ತದೆ.
ಕೊರೋನದಿಂದ ಸಂಕಷ್ಟದಲ್ಲಿರುವ ಸಣ್ಣ ಕೈಗಾರಿಕೆಗಳಿಗೆ ರಾಜ್ಯ ಸರ್ಕಾರದಿಂದ ಈ ಕೆಳಗಿನ ಯೋಜನೆ ರೂಪಿಸಲಾಗಿರುತ್ತದೆ.
1. ಇಂಧನ ಇಲಾಖೆಯು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಏಪ್ರಿಲ್ ಮತ್ತು ಮೇ 2020 ತಿಂಗಳ ಬೇಡಿಕೆ ಶುಲ್ಕ ಮತ್ತು ಸ್ಥಿರ ಶುಲ್ಕವನ್ನು ಮನ್ನಾ ಮಾಡಿರುತ್ತದೆ.
2. ಇಂಧನ ಇಲಾಖೆಯು ವಿದ್ಯುತ್ ಬಿಲ್‌ನ್ನು ಪ್ರಾಮಾಣಿಕವಾಗಿ ನಿಗದಿತ ಅವಧಿಯೊಳಗೆ ಪಾವತಿಸುವ ಕೈಗಾರಿಕೆಗಳಿಗೆ ರಿಯಾಯಿತಿಯನ್ನು ನೀಡಿರುತ್ತದೆ. ಹೆಚ್‌ಟಿ ಗರಿಷ್ಠ ಮಿತಿ ರೂ. 1 ಲಕ್ಷ, ಎಲ್‌ಟಿ ಗರಿಷ್ಠ ಮಿತಿ ರೂ. 10,000/–
<table>
<tr><td>1 ರಿಂದ 5 ದಿನದೊಳಗೆ ಪಾವತಿಸಿದಲ್ಲಿ</td><td>ಶೇ 1% ರಿಯಾಯಿತಿ</td></tr>
<tr><td>6 ರಿಂದ 15 ದಿನದೊಳಗೆ ಪಾವತಿಸಿದಲ್ಲಿ</td><td>ಶೇ 0.5% ರಿಯಾಯಿತಿ</td></tr>
<tr><td>15 ರಿಂದ 30 ದಿನದೊಳಗೆ ಪಾವತಿಸಿದಲ್ಲಿ</td><td>ಯಾವುದೇ ರಿಯಾಯಿತಿ ಇರುವುದಿಲ್ಲ</td></tr>
</table>
3. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಮಾರ್ಚ್, ಏಪ್ರಿಲ್ ಮತ್ತು ಮೇ 2020 ತಿಂಗಳ ಕಂತು ಪಾವತಿಸದ್ದಲ್ಲಿ ಆ ಪಾವತಿಯನ್ನು ಕ್ರಮವಾಗಿ 3 ತಿಂಗಳು ಮುಂದೂಡಲಾಗಿದೆ ಮತ್ತು ಈ ಮೊತ್ತಕ್ಕೆ ಯಾವುದೇ ಬಡ್ಡಿಯನ್ನು ವಿಧಿಸುವುದಿಲ್ಲ.
4. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮವು ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಕಂತು, ಮಳಿಗೆಗಳ ಬಾಡಿಗೆ ಮತ್ತು ನೀರಿನ ಶುಲ್ಕಗಳ ಏಪ್ರಿಲ್ ಮತ್ತು ಮೇ 2020 ತಿಂಗಳುಗಳ ಕಂತನ್ನು ಈ
</td></tr>
</table>

<table>
<tr><td></td><td></td><td>ಕೆಳಗಿನಂತೆ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಇದಕ್ಕೆ ಯಾವುದೇ ಬಡ್ಡಿಯನ್ನು ವಿಧಿಸಲಾಗುವುದಿಲ್ಲ.<br><table><tr><td>ಏಪ್ರೀಲ್ 2020 ಕಂತು</td><td>ಜೂನ್ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು</td></tr><tr><td>ಮೇ 2020 ಕಂತು</td><td>ಜುಲೈ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು</td></tr><tr><td>ಜೂನ್ 2020 ಕಂತು</td><td>ಆಗಸ್ಟ್ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು</td></tr></table><br>ಕೊರೋನಾ 2ನೇ ಅಲೆಯ ನಂತರ ರಾಜ್ಯ ಸರ್ಕಾರದ ಇಂಧನ ಇಲಾಖೆಯು ದಿನಾಂಕ: 21.06.2021 ರ ಆದೇಶದಂತೆ, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಪಾವತಿಸಬೇಕಾದ ಮೇ ಮತ್ತು ಜೂನ್ 2021 ತಿಂಗಳ ಬೇಡಿಕೆ / ನಿಗದಿತ ಶುಲ್ಕವನ್ನು ಮನ್ನಾ ಮಾಡಿರುತ್ತದೆ.</td></tr>
<tr><td>ಆ)</td><td>ಸಣ್ಣ ಕೈಗಾರಿಕೆಗಳಲ್ಲಿ ಕೆಲಸ ಮಾಡುತ್ತಿದ್ದ ಅನೇಕ ಕಾರ್ಮಿಕರನ್ನು ಕೆಲಸದಿಂದ ತೆಗೆದುಹಾಕಿದ್ದು, ಬಡ ಕಾರ್ಮಿಕರನ್ನು ಪುನರ್ ನೇಮಕ ಮಾಡಿಕೊಳ್ಳುವಂತೆ ನಿರ್ದೇಶನ ನೀಡಲು ಸಾಧ್ಯವೇ; ಈ ಬಗ್ಗೆ ಸರ್ಕಾರದ ಚಿಂತನೆ ಏನು;</td><td>ಕೆಲಸದಿಂದ ತೆಗೆದು ಹಾಕಿರುವ ಯಾವುದೇ ಕಾರ್ಮಿಕರನ್ನು ಪುನರ್‌ನೇಮಕ ಮಾಡಿಕೊಳ್ಳುವಂತೆ ನಿರ್ದೇಶನ ನೀಡಲು ಕಾರ್ಮಿಕ ಕಾಯ್ದೆಗಳಲ್ಲಿ ಅವಕಾಶವಿರುವುದಿಲ್ಲ. ಆದರೆ, ಯಾವುದೇ ಸಂಸ್ಥೆಯ / ಕೈಗಾರಿಕೆಯ ಕಾರ್ಮಿಕರು ತಮ್ಮನ್ನು ಕೆಲಸದಿಂದ ತೆಗೆದು ಹಾಕಿದ್ದಲ್ಲಿ, ಅಂತಹ ಭಾದಿತ ಕಾರ್ಮಿಕನು ಕೈಗಾರಿಕಾ ವಿವಾದ ಕಾಯ್ದೆ 1947 ರ ಪ್ರಾವಧಾನಗಳನ್ವಯ ಕೈಗಾರಿಕಾ ವಿವಾದ ಮೂಲಕ ಪರಿಹಾರ ಕಂಡುಕೊಳ್ಳಲು ಅವಕಾಶವಿರುತ್ತದೆ.</td></tr>
<tr><td>ಇ)</td><td>ಸಣ್ಣ ಕೈಗಾರಿಕೆಗಳಿಗೆ ವಿಶೇಷ ಪ್ಯಾಕೇಜ್ ನೀಡಲಾಗಿದೆಯೇ; ಅಥವಾ ನೀಡುವ ಉದ್ದೇಶ ಇದೆಯೇ;</td><td>ಕೊರೋನಾದಿಂದ ಅನೇಕ ಸಣ್ಣ ಉದ್ಯಮಗಳಿಗೆ ತೊಂದರೆಯಾಗಿದ್ದು, ಈ ಸಂದರ್ಭದಲ್ಲಿ ಸಣ್ಣ ಉದ್ದಿಮೆದಾರರಿಗೆ ಪ್ರೋತ್ಸಾಹ ನೀಡಲು ಸರ್ಕಾರ ವಿವಿಧ ಯೋಜನೆಗಳನ್ನು ಜಾರಿಗೊಳಿಸಲಾಗಿದ್ದು, ಇದರ ವಿವರವನ್ನು ಮೇಲಿನ ಉಪ ಪ್ರಶ್ನೆ 'ಅ' ರ ಉತ್ತರದಲ್ಲಿ ವಿವರಿಸಿದೆ.</td></tr>
</table>

**ಸಿಐ 138 ಸಿಎಸ್‌ಸಿ 2021**

*(ಎನ್. ನಾಗರಾಜು (ಎಂ.ಟಿ.ಬಿ))*
ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ
ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು.